ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

**ಕರ್ನಾಟಕ ವಿಧಾನ ಪರಿಷತ್ತು**

ನೂರ ನಲವತ್ತೊಂದನೆಯ ಅಧಿವೇಶನ

ಶುಕ್ರವಾರ, ದಿನಾಂಕ: 25ನೇ ಸೆಪ್ಟಂಬರ್, 2020

ಗ್ರಾಮ ಪಂಚಾಯಿತಿ ಮತ್ತು ಗ್ರಾಮ ಪಂಚಾಯಿತಿ ಮೂಲಭೂತ ಅವಶ್ಯಕತೆಯನ್ನು ಕಲ್ಪಿಸುವ ಕುರಿತು

ಶ್ರೀ ಮೋಹನ್ ಕುಮಾರ್ ಕೊಂಡಜ್ಜಿ (ನಾಮನಿರ್ದೇಶನ ಹೊಂದಿದವರು ):-

652 (748) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದಲ್ಲಿರುವ ಒಟ್ಟು ಗ್ರಾಮ ಪಂಚಾಯತಿಗಳ ಸಂಖ್ಯೆ ಎಷ್ಟು ; ಇವುಗಳಲ್ಲಿ ಸ್ವಂತ ನಿವೇಶನ ಹೊಂದಿ ಸ್ವಂತ ಕಟ್ಟಡದಲ್ಲಿ ಕಾರ್ಯನಿರ್ವಹಿಸುತ್ತಿರುವ ಮತ್ತು ಬಾಡಿಗೆ ಕಟ್ಟಡದಲ್ಲಿ ಕಾರ್ಯನಿರ್ವಹಿಸುತ್ತಿರುವ ಗ್ರಾಮ ಪಂಚಾಯತಿಗಳ ಸಂಖ್ಯೆ ಎಷ್ಟು; (ಜಿಲ್ಲಾವಾರು ತಾಲ್ಲೂಕುವಾರು ವಿವರವನ್ನು ನೀಡುವುದು)

(ಆ) ರಾಜ್ಯದಲ್ಲಿ ಸ್ಮಶಾನ/ಧಫನ ಭೂಮಿಯನ್ನು ಹೊಂದಿರುವ ಗ್ರಾಮ ಪಂಚಾಯತಿಗಳ ಸಂಖ್ಯೆ ಎಷ್ಟು ; ಅವುಗಳಲ್ಲಿ ಚಿತಾಗಾರವನ್ನು ಹೊಂದಿರುವ ಗ್ರಾಮ ಪಂಚಾಯತಿಗಳ ಸಂಖ್ಯೆ ಎಷ್ಟು ; ಸ್ಮಶಾನ/ಧಫನ ಭೂಮಿಯನ್ನು ಹೊಂದಿರುವ ಗ್ರಾಮ ಪಂಚಾಯತಿಗಳ ಸಂಖ್ಯೆ ಎಷ್ಟು ; (ಜಿಲ್ಲಾವಾರು, ತಾಲ್ಲೂಕುವಾರು ಮಾಹಿತಿಯನ್ನು ಒದಗಿಸುವುದು)

(ಇ) ಕಳೆದ 2 ವರ್ಷಗಳಲ್ಲಿ ಗ್ರಾಮ ಪಂಚಾಯತಿಗಳಿಗೆ ಮಂಜೂರಾತಿಯಾದ ಮನೆಗಳ ಸಂಖ್ಯೆ ಎಷ್ಟು ; ಬಿಡುಗಡೆಯಾದ ಅನುದಾನವೆಷ್ಟು ; ಬಿಡುಗಡೆಗೆ ಬಾಕಿಯಿರುವ ಅನುದಾನವೆಷ್ಟು; (ಜಿಲ್ಲಾವಾರು ತಾಲ್ಲೂಕುವಾರು ವಿವರ ನೀಡುವುದು)

(ಈ) ರಾಜ್ಯದಲ್ಲಿ ನಿವೇಶನ ರಹಿತರಿಗೆ ನಿವೇಶನ ಹಂಚುವ ವಸತಿಯನ್ನು ನೀಡುವ ಗ್ರಾಮ ಪಂಚಾಯತಿಗಳು ಸ್ವಂತ ಕಟ್ಟಡವನ್ನು ಹೊಂದಲಾಗದೇ ಅಸಹಾಯಕತೆಯ ಪರಿಸ್ಥಿತಿಯಲ್ಲಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಇಲಾಖೆಯಿಂದ ಗ್ರಾಮ ಪಂಚಾಯತಿಗೆ ಸ್ವಂತ ಕಟ್ಟಡವನ್ನು ಒದಗಿಸಲು ಕಾಲಮಿತಿ ಹಾಕಿ ಕೊಳ್ಳಲಾಗಿದೆಯೇ ?